## ಕರ್ನಾಟಕ ಸರ್ಕಾರ

ನಂ.ಗ್ರಾಅಪ/174/ಗ್ರಾಪಂಅ/2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 08-07-2011

## ಸುತ್ತೋಲೆ

ವಿಷಯ: ಬಾಲ್ಯ ವಿವಾಹವನ್ನು ತಡೆಗಟ್ಟುವ ಹಾಗೂ ಮಕ್ಕಳ ಹಕ್ಕನ್ನು ಪ್ರತಿಪಾದಿಸುವ ನಿಟ್ಟಿನಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಅನುಸರಿಸಬೇಕಾದ ವಿಧಿ ವಿಧಾನಗಳ ಮಾರ್ಗಸೂಚಿಗಳು.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 638 ಗ್ರಾಪಂಅ 2007, ದಿನಾಂಕ: 30-10-2007.
2. ರಾಜ್ಯ ಉಚ್ಛ ನ್ಯಾಯಾಲಯದ ನಿರ್ದೇಶನದನ್ವಯ ರಚಿತವಾದ ಅತ್ಯುನ್ನತ ಸಮಿತಿಯ ವರದಿ.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಬ್ಲ್ಯೂಸಿಡಿ 377 ಎಸ್‌ಡಬ್ಲ್ಯೂಡಬ್ಲ್ಯೂ 2004, ದಿನಾಂಕ: 6-2-2008.

---

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3-ಎ, 58 ಮತ್ತು 61 (2) ಸಿ ರಡಿಯ ನಿರೂಪಣೆಯಂತೆ ಗ್ರಾಮೀಣ ಪ್ರದೇಶದ ಮಹಿಳಾ ಮತ್ತು ಮಕ್ಕಳ ಕಲ್ಯಾಣಗಳಿಗೆ ಸಂಬಂಧಿಸಿದ ಪ್ರಮುಖ ವಿಷಯಗಳನ್ನು ಚರ್ಚಿಸಿ ಅವರುಗಳ ಸಾಮಾಜಿಕ ಭದ್ರತೆಗಾಗಿ ಕಾರ್ಯಕ್ರಮ ರೂಪಿಸುವುದು ಪಂಚಾಯತ್ ರಾಜ್ ಸಂಸ್ಥೆಗಳ ಅದರಲ್ಲೂ ಕೆಳಸ್ತರದ ಹಂತವಾದ ಗ್ರಾಮ ಪಂಚಾಯಿತಿಯ ಆದ್ಯ ಕರ್ತವ್ಯವಾಗಿರುತ್ತದೆ.

ಮಕ್ಕಳ ಹಕ್ಕುಗಳನ್ನು ಪ್ರತಿಪಾದಿಸುವ ಹಾಗೂ ಅವರುಗಳ ಸಾಮಾಜಿಕ, ಭೌತಿಕ ಮತ್ತು ಬೌದ್ಧಿಕ ರಕ್ಷಣೆಗಾಗಿ ವಿವರವಾಗಿ ಚರ್ಚಿಸಿ ಕಾರ್ಯಕ್ರಮಗಳನ್ನು ರೂಪಿಸಿಕೊಳ್ಳಲು ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸುವಂತೆ ಉಲ್ಲೇಖ (1) ರಲ್ಲಿನ ಸುತ್ತೋಲೆಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಬಾಲ್ಯ ವಿವಾಹವನ್ನು ತಡೆಗಟ್ಟಲು ರಾಜ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 11154/2006 ರಲ್ಲಿ ದಿನಾಂಕ: 10-11-2010 ರಂದು ನೀಡಿರುವ ನಿರ್ದೇಶನದನ್ವಯ ದಿನಾಂಕ: 21-12-2010 ರ ಸಂಖ್ಯೆ: 310/2010 ರಲ್ಲಿ ರಚಿತವಾಗಿದ್ದ ಕೋರ್ ಕಮಿಟಿಯು ಸರ್ಕಾರಕ್ಕೆ ಸಲ್ಲಿಸಿರುವ ಶಿಫಾರಸ್ಸಿನನ್ವಯ ರಾಜ್ಯ ಸರ್ಕಾರವು ಅನುಸರಣಾ ಕ್ರಮವನ್ನು ಕೈಗೊಳ್ಳಬೇಕಾಗಿರುತ್ತದೆ. ಈ ಸಂಬಂಧವಾಗಿ ಗ್ರಾಮೀಣ ಪ್ರದೇಶ ಜನತೆಗೆ ತಿಳುವಳಿಕೆಯನ್ನು ಮೂಡಿಸುವುದು ಗ್ರಾಮ ಪಂಚಾಯಿತಿಗಳ ಕರ್ತವ್ಯವಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ವಾರ್ಡ್ ಸಭೆ/ಗ್ರಾಮ

ಸಭೆಗಳಲ್ಲಿ ಬಾಲ್ಯ ವಿವಾಹದಂತಹ ಅನಿಷ್ಟ ಸಾಮಾಜಿಕ ಪಿಡುಗಿನ ಬಗ್ಗೆ ಚರ್ಚಿಸಿ ಇಂತಹ ಅಮಾನವೀಯ ಪದ್ಧತಿಯನ್ನು ತಡೆಹಿಡಿಯಲು, ಖಂಡಿಸಲು ಹಾಗೂ ಅಂತಹ ಕೃತ್ಯಗಳು ಪುನರಾವರ್ತನೆಯಾಗದಂತೆ ಜನ-ಸಾಮಾನ್ಯರಲ್ಲಿ ತಿಳುವಳಿಕೆ ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಲಾಗಿದೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 61 (2) ರಡಿ ರಚಿತವಾಗಿರುವ ಸಾಮಾಜಿಕ ನ್ಯಾಯ ಸಮಿತಿಯು ಪ್ರತಿ ಸಭೆಯಲ್ಲಿಯೂ ಬಾಲ್ಯ ವಿವಾಹದ ಸಮಸ್ಯೆಯ ಬಗ್ಗೆ ಚರ್ಚಿಸಲು, ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮೀಕ್ಷೆ ನಡೆಸಿ ನಿಗಾ ವಹಿಸಲು ಸೂಚಿಸಿದೆ.

ಪಂಚಾಯತ್ ರಾಜ್ ಸಂಸ್ಥೆಯ ಸದಸ್ಯರುಗಳಿಗೆ ಬಾಲ್ಯ ವಿವಾಹದ ಸಮಸ್ಯೆಗಳ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ವಹಿಸಬೇಕು. ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು, ಸದಸ್ಯರುಗಳು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನೊಳಗೊಂಡಂತೆ ಕಾರ್ಯನಿರತ ಅಧಿಕಾರಿಗಳಿಗೆ ತರಬೇತಿ ನೀಡುವ ಕಾರ್ಯಕ್ರಮಗಳಲ್ಲಿ ಬಾಲ್ಯ ವಿವಾಹದ ಪಿಡುಗು ಹಾಗೂ ಮಕ್ಕಳ ಗ್ರಾಮ ಸಭೆಯ ಮಹತ್ವದ ಬಗ್ಗೆ ಸೂಕ್ತ ತರಬೇತಿಯನ್ನು ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ಸೂಚಿಸಿದೆ.

ಬಾಲ್ಯ ವಿವಾಹ ಪದ್ಧತಿಯ ಪಿಡುಗನ್ನು ನಿವಾರಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಹೊರಡಿಸಿರುವ ಉಲ್ಲೇಖ (3) ರಲ್ಲಿನ ಅಧಿಸೂಚನೆಯನ್ವಯ ಗ್ರಾಮ ಪಂಚಾಯಿತಿಗಳು ಸೂಕ್ತ ಕ್ರಮ ವಹಿಸಬೇಕು. ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯವನ್ನು ನಿರ್ಮಿಸಬೇಕು. ಹಾಗೂ ಇದನ್ನು ಖಚಿತಪಡಿಸಿಕೊಳ್ಳಬೇಕು.

2012 ನೇ ನವೆಂಬರ್ ಮಾಹೆಯಿಂದ ಸರ್ಕಾರದ ವತಿಯಿಂದ ಯಾವುದೇ ಸವಲತ್ತುಗಳನ್ನು ಪಡೆಯಲು ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅಂತಹ ವ್ಯಕ್ತಿಗಳಿಂದ ಈ ಕೆಳಕಂಡ ಪ್ರತಿಜ್ಞಾ ವಿಧಿಯನ್ನು ಪಡೆಯಬೇಕು.

" ಬಾಲ್ಯ ವಿವಾಹವನ್ನು ನಾನು ನೆರವೇರಿಸುವುದಿಲ್ಲ." ಅಂತಹ ಕಾರ್ಯಕ್ರಮಗಳಲ್ಲಿ ಭಾಗಿಯಾಗುವುದಿಲ್ಲ. ಮತ್ತು ಇಂತಹ ಸಂಭವನೀಯ ಪ್ರಕರಣಗಳನ್ನು ಸರ್ಕಾರದ ಗಮನಕ್ಕೆ ತರುತ್ತೇನೆ. ತಪ್ಪಿದಲ್ಲಿ, ನನಗೆ ಒದಗಿಸಿರುವ ಫಲಾನುಭವವನ್ನು ಹಿಂಪಡೆದುಕೊಳ್ಳಬಹುದು."

ಪ್ರತಿ ಗ್ರಾಮ ಪಂಚಾಯಿತಿಯ ಹಂತದಲ್ಲಿ ಇಂತಹ ಪ್ರಕರಣಗಳು ಸಂಭವಿಸಬಹುದಾದ ಕುಟುಂಬಗಳ ಬಗ್ಗೆ ಸಮೀಕ್ಷೆ ನಡೆಸಿ ಅವರುಗಳಿಗೆ ತಿಳುವಳಿಕೆ ಮೂಡಿಸುವುದು ಹಾಗೂ ಅಗತ್ಯ

ನೆರವನ್ನು ನೀಡುವಂತೆ ಸೂಚಿಸಿದೆ. ಈ ಸಂಬಂಧವಾಗಿ ಅಂಕಿ ಅಂಶಗಳ ಪ್ರದೇಶವಾರು ವಿವರಗಳ ದಾಖಲಾತಿಯನ್ನು ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಬೇಕು. 0–18 ವಯೋಮಾನದ ಮಕ್ಕಳ ವಿವರಗಳನ್ನು ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಿಸಲು ಅನುವಾಗುವಂತೆ MIS ತಂತ್ರಾಂಶ ರೂಪಿಸಬೇಕು.

ಗ್ರಾಮ ಪಂಚಾಯಿತಿಗಳ ಆದ್ಯ ಕರ್ತವ್ಯಗಳಲ್ಲಿ ಸೇರ್ಪಡೆಗೊಳಿಸಿರುವ ಮೇಲಿನ ಅಂಶಗಳ ಬಗ್ಗೆ ವಿಚಕ್ಷಣೆ ವಹಿಸದ, ಜವಾಬ್ದಾರಿಯನ್ನು ನಿರ್ವಹಿಸಿದ ಹಾಗೂ ಈ ಸಂಬಂಧವಾಗಿ ಉದಾಸೀನ ಮನೋಭಾವ ಪ್ರದರ್ಶಿಸುವ ಪಂಚಾಯತ್ ರಾಜ್ ಸಂಸ್ಥೆಗಳ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 268 ರಡಿ ಕ್ರಮ ವಹಿಸುವಂತೆ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಅಧಿಕಾರಿಗಳು ಅದರಲ್ಲೂ ವಿಶೇಷವಾಗಿ ಗ್ರಾಮ ಪಂಚಾಯಿತಿ ಹಂತದ ಅಧಿಕಾರಿ/ನೌಕರರುಗಳ ವಿರುದ್ಧ ಕಠಿಣ ಕ್ರಮ ಅಂದರೆ ಕಾರ್ಯನಿರ್ವಹಣಾ ವರದಿಯಲ್ಲಿ ಆಕ್ಷೇಪಣಾ ಅಭಿಪ್ರಾಯವನ್ನು ನಮೂದಿಸಬೇಕು. ಹಾಗೂ ಅಂತಹವರ ವಿರುದ್ಧ ಕಠಿಣ ಶಿಕ್ಷೆಯನ್ನು ನೀಡಲು ಕ್ರಮ ವಹಿಸಬೇಕು.

(ಡಾ: ಅಮಿತಾ ಪ್ರಸಾದ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

೧) ಎಲ್ಲಾ ಜಿಲ್ಲಾಧಿಕಾರಿಗಳು,

೨) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,

೩) * ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.

೪) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.

೫) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

* ಈ ಸುತ್ತೋಲೆಯ ಪ್ರತಿಯನ್ನು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಳುಹಿಸಿ ಸುತ್ತೋಲೆಯಂತೆ ಕ್ರಮ ವಹಿಸುವಂತೆ ನಿರ್ದೇಶನ ನೀಡಲು ಸೂಚಿಸಿದೆ.

ಪ್ರತಿ:

ಸರ್ಕಾರದ ಅಧೀನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.